*FRNI No. KARBIL/2001/47147*

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-III | ಬೆಂಗಳೂರು, ಗುರುವಾರ, ಮೇ ೨, ೨೦೧೯ (ವೈಶಾಖ ೧೨, ಶಕ ವರ್ಷ ೧೯೪೦) | ನಂ. ೩೩೦ |
|---|---|---|
| **Part-III** | ***Bengaluru, Thursday, May 2, 2019 (Vaisakha 12, Shaka Varsha 1940)*** | ***No. 330*** |


## ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿ ಕಟ್ಟಡ (ಹಿಂಭಾಗ), ನಂ. 8, ಕನ್ನಿಂಗ್‌ಹ್ಯಾಂ ರಸ್ತೆ, ಬೆಂಗಳೂರು-52.

### ಆದೇಶ

**ಸಂಖ್ಯೆ: ರಾಚುಆ:07:ಟಿಪಿಡಿಪಿ/2019, ಬೆಂಗಳೂರು, ದಿನಾಂಕ: 02-05-2019**

ಜಿಲ್ಲಾಧಿಕಾರಿಗಳು ಸಲ್ಲಿಸಿರುವ ವರದಿಯನ್ವಯ ರಾಜ್ಯದ **8 ಜಿಲ್ಲೆಗಳ 8 ತಾಲ್ಲೂಕು ಪಂಚಾಯತಿ**ಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ **10(ಹತ್ತು)** ಸದಸ್ಯ ಸ್ಥಾನಗಳನ್ನು ಉಪ-ಚುನಾವಣೆಯ ಮೂಲಕ ಭರ್ತಿ ಮಾಡಲು ರಾಜ್ಯ ಚುನಾವಣಾ ಆಯೋಗವು **ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 308ಎಎ ಮತ್ತು 308ಎಬಿ ರನ್ವಯ ಚುನಾವಣಾ ವೇಳಾ ಪಟ್ಟಿಯನ್ನು ಈ ಕೆಳಕಂಡಂತೆ ಘೋಷಿಸಿದೆ.**

ವಿವಿಧ ಕಾರಣಗಳಿಂದ ತೆರವಾಗಿರುವ **ತಾಲ್ಲೂಕು ಪಂಚಾಯತಿಗಳ** ಸದಸ್ಯ ಸ್ಥಾನಗಳ ವಿವರಗಳನ್ನು **ಅನುಬಂಧ-1** ರಲ್ಲಿ ತೋರಿಸಲಾಗಿದೆ.

### ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿಗಳು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 13-05-2019 (ಸೋಮವಾರ) |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 16-05-2019 (ಗುರುವಾರ) |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 17-05-2019 (ಶುಕ್ರವಾರ) |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 20-05-2019 (ಸೋಮವಾರ) |
| 5 | **ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00 ಗಂಟೆಯವರೆಗೆ)** | **29-05-2019 (ಬುಧವಾರ)** |
| 6 | ಮರು ಮತದಾನ ಅವಶ್ಯವಿದ್ದಲ್ಲಿ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ (ಬೆಳಿಗ್ಗೆ 7-00 ಗಂಟೆಯಿಂದ ಸಂಜೆ 5-00 ಗಂಟೆಯವರೆಗೆ) | 30-05-2019 (ಗುರುವಾರ) |
| 7 | ಮತಗಳ ಎಣಿಕೆ ದಿನಾಂಕ ಮತ್ತು ದಿನ (ಬೆಳಿಗ್ಗೆ 8-00 ಗಂಟೆಯಿಂದ ತಾಲ್ಲೂಕು ಕೇಂದ್ರಗಳಲ್ಲಿ) | 31-05-2019 (ಶುಕ್ರವಾರ) |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೊ ಆ ದಿನಾಂಕ ಮತ್ತು ದಿನ | 31-05-2019 (ಶುಕ್ರವಾರ) |

ಜಿಲ್ಲಾಧಿಕಾರಿಗಳು, ಆಯೋಗವು ಆದೇಶಿಸಿರುವ ಮೇಲ್ಕಂಡ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993 ರ ನಿಯಮ 12 ರಡಿಯಲ್ಲಿ ಚುನಾವಣಾ ಅಧಿಸೂಚನೆಯನ್ನು **ಪ್ರಪತ್ರ-1** ರಲ್ಲಿ ಹೊರಡಿಸತಕ್ಕದ್ದು ಹಾಗೂ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿಸಿದ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿಗಳ ಕಚೇರಿ, ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿ ಕಚೇರಿಗಳಲ್ಲಿರುವ ಸೂಚನಾ ಫಲಕದ ಮೇಲೆ ಹಾಗೂ ಇನ್ನಿತರೆ ಮುಖ್ಯ ಸ್ಥಳಗಳಲ್ಲೂ ಸಹ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಫ್ಯಾಕ್ಸ್/ಇ-ಮೇಲ್ ಮೂಲಕ ಕಳುಹಿಸುವುದು. ಅಧಿಸೂಚನೆಯ ಪ್ರತಿಯನ್ನು ಅಂದೇ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಚುನಾವಣಾಧಿಕಾರಿಗಳು **ಪ್ರಪತ್ರ-3** ರಲ್ಲಿ ಚುನಾವಣಾ ನೋಟೀಸನ್ನು ಸಂಬಂಧಪಟ್ಟ, **ತಾಲ್ಲೂಕು ಪಂಚಾಯತ್** ಕಚೇರಿಗಳ ಸೂಚನಾ ಫಲಕದ ಮೇಲೆ ಪ್ರಕಟಿಸಿ ಚುನಾವಣಾ ಪ್ರಕ್ರಿಯೆಯನ್ನು ಪ್ರಾರಂಭಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು.

ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

**ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಪ್ರಕರಣ 308ಎಸಿ ರಂತೆ ಚುನಾವಣಾ ನೀತಿ ಸಂಹಿತೆಯು ಚುನಾವಣೆ ನಡೆಯುವ ತಾಲ್ಲೂಕು ಪಂಚಾಯತಿಗಳ ಕ್ಷೇತ್ರ ವ್ಯಾಪ್ತಿಯಲ್ಲಿ ದಿನಾಂಕ: 13-05-2019 ರಿಂದ ದಿನಾಂಕ: 31-05-2019 ರವರೆಗೆ ಜಾರಿಯಲ್ಲಿರುತ್ತದೆ.** ಉಪ-ಚುನಾವಣೆಯ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು.

1. ಪ್ರಕರಣ 308ಎಸಿ(ಬಿ) ರನ್ವಯ ಚುನಾವಣಾಧಿಕಾರಿ (ರಿಟರ್ನಿಂಗ್ ಆಫೀಸರ್) ಗಳು ಮತದಾನ ನಡೆಯುವ ಪ್ರತಿಯೊಂದು ಮತಗಟ್ಟೆಗಳಲ್ಲೂ ಚುನಾವಣಾ ಪ್ರಕ್ರಿಯೆಗಳ ವಿಡಿಯೋ-ಗ್ರಾಫಿಕ್ ಚಿತ್ರೀಕರಣ ಮಾಡಿಸುವುದು.
2. ಪ್ರಕರರಣ 308ಎಸಿ(ಸಿ) ರನ್ವಯ ಯಾವ ಪಂಚಾಯತ್ ಪ್ರದೇಶದಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೋ ಆ ಪಂಚಾಯತ್ ಪ್ರದೇಶದ ಒಳಗೆ ನೀತಿ ಸಂಹಿತೆ ಜಾರಿಯಲ್ಲಿರುವ ಇಡೀ ಅವಧಿಯವರೆಗೆ ಎಲ್ಲಾ ಮದ್ಯದ ಅಂಗಡಿಗಳನ್ನು ಹಾಗೂ ಮದ್ಯ ತಯಾರಿಕಾ ಘಟಕಗಳನ್ನು ಅದರ ಮಾಲೀಕರು, ಅಧಿಭೋಗದಾರರು ಮತ್ತು ಸಂದರ್ಭಾನುಸಾರ ಮುಚ್ಚತಕ್ಕದ್ದು ಮತ್ತು ಮೊಹರು ಮಾಡಿ ಕೀಯನ್ನು ಜಿಲ್ಲಾಧಿಕಾರಿಗಳಿಗೆ ಅಥವಾ ಅಧಿಕಾರ ವ್ಯಾಪ್ತಿಯುಳ್ಳ ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ರವರಿಗೆ ಒಪ್ಪಿಸತಕ್ಕದ್ದು.
3. ನೀತಿ ಸಂಹಿತೆ ಜಾರಿಯಲ್ಲಿರುವ ಅವಧಿಯಲ್ಲಿ ಯಾರಾದರೂ ಮದ್ಯವನ್ನು ಸ್ವಾಧೀನದಲ್ಲಿಟ್ಟುಕೊಂಡಿರುವುದು ಅಥವಾ ಮದ್ಯವನ್ನು ಸೇವಿಸಿದ ತರುವಾಯ ಸಾರ್ವಜನಿಕ ಉಪದ್ರವ, ಬೀದಿ ರಂಪಾಟ ಮಾಡುತ್ತಿರುವುದು ಕಂಡುಬಂದರೆ, ಮುನ್ನೆಚ್ಚರಿಕೆ ಕ್ರಮವಾಗಿ ಚುನಾವಣೆ ಮುಕ್ತಾಯವಾಗುವವರೆಗೆ ಅವರನ್ನು ಕಸ್ಟಡಿಯಲ್ಲಿ ಇಡತಕ್ಕದ್ದು.
4. ಚುನಾವಣೆ ಕಾಲದಲ್ಲಿ ಭ್ರಷ್ಟಾಚಾರಗಳನ್ನು ತಡೆಗಟ್ಟುವ ಬಗ್ಗೆ ಸೂಕ್ತ ತಂಡವನ್ನು ರಚಿಸಿ ಕ್ರಮಗಳನ್ನು ಕೈಗೊಳ್ಳುವುದು.
5. ಪ್ರಕರಣ 308ಎಬಿ(ಎ) ರನ್ವಯ ನಾಮಪತ್ರ ಸಲ್ಲಿಸಲು ಕೊನೆಯ ದಿನಾಂಕವು ಅಧಿಸೂಚನೆ ಪ್ರಕಟಣೆಯ ದಿನಾಂಕದ ತರುವಾಯ ಬರುವ ಮೂರನೆಯ ದಿನವಾಗಿರುತ್ತದೆ ಎಂಬ ಬಗ್ಗೆ ವ್ಯಾಪಕ ಪ್ರಚಾರ ಮಾಡುವುದು.

**ವಿಶೇಷ ಸೂಚನೆ:**

1. ಈಗಾಗಲೇ ನೀಡಿರುವ ನಿರ್ದೇಶನಗಳಂತೆ ಉಪ-ಚುನಾವಣೆ ನಡೆಯಲಿರುವ **ತಾಲ್ಲೂಕು ಪಂಚಾಯತಿಗಳ ಕ್ಷೇತ್ರಗಳಿಗೆ** ಸಂಬಂಧಿಸಿದಂತೆ ಹಾಲಿ ಚಾಲ್ತಿಯಲ್ಲಿರುವ ವಿಧಾನಸಭಾ ಮತದಾರರ ಪಟ್ಟಿಯನ್ನು ಅಳವಡಿಸಿಕೊಂಡು ತಯಾರಿಸಲಾಗಿರುವ ಮತದಾರರ ಪಟ್ಟಿಗಳಂತೆ ಚುನಾವಣೆ ನಡೆಸುವುದು.
2. ಉಪ-ಚುನಾವಣೆ ನಡೆಸಲಾಗುವ ತಾಲ್ಲೂಕು ಪಂಚಾಯತಿಗಳ ಕ್ಷೇತ್ರಗಳಿಗೆ ಚುನಾವಣಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಕ ಮಾಡಿ ಅವರಿಗೆ ತರಬೇತಿಯನ್ನು ಹಾಗೂ ಚುನಾವಣೆಗೆ ಸಂಬಂಧಪಟ್ಟ ಎಲ್ಲಾ ಅಗತ್ಯ ಮಾಹಿತಿ ಸುತ್ತೋಲೆ/ನಿರ್ದೇಶನ ಪತ್ರಗಳ ಪ್ರತಿಗಳನ್ನು ನೀಡುವುದು.
3. ನೀತಿ ಸಂಹಿತೆ ಉಲ್ಲಂಘನೆ ಪ್ರಕರಗಳು ಗಮನಕ್ಕೆ ಬಂದಾಗ ಆಯೋಗದ ಆದೇಶ ಸಂಖ್ಯೆ: **ಎಸ್‌ಇಸಿ/10/ಎಂಐಎಸ್/2016, ದಿನಾಂಕ: 29-06-2016 ಹಾಗೂ ತಿದ್ದುಪಡಿ ದಿನಾಂಕ: 06-07-2016 ರಂತೆ ಕ್ರಮ ವಹಿಸುವುದು.**
4. ಉಪ-ಚುನಾವಣೆ ನಡೆಸಲಾಗುವ ತಾಲ್ಲೂಕು ಪಂಚಾಯತಿ ಸ್ಥಾನಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ಸ್ಥಳೀಯ ಪತ್ರಿಕೆಗಳಲ್ಲಿ ಸುದ್ದಿಯಾಗಿ (ವೆಚ್ಚ ಬಾರದಂತೆ) ಪ್ರಕಟಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವುದು.

5. ಕಾಲಕಾಲಕ್ಕೆ ಚುನಾವಣೆಗೆ ಸಂಬಂಧಿಸಿದ ವರದಿಗಳನ್ನು ಆಯೋಗಕ್ಕೆ ನಿಗದಿತ ಸಮಯದೊಳಗೆ ಸಲ್ಲಿಸುವುದು.
6. ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ/248/ಇಜಿಪಿ/2015, ದಿನಾಂಕ: 06-10-2016 ರಂತೆ **ವಿದ್ಯುನ್ಮಾನ ಮತಯಂತ್ರದಲ್ಲಿ "NOTA" ಅವಕಾಶವನ್ನು ಕಲ್ಪಿಸುವುದು.**

ಆದೇಶಾನುಸಾರ

**ಎಂ.ಪಿ.ರಂಜಿತಾ**
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ.

**ಅನುಬಂಧ-1**
**(ಆಯೋಗದ ಆದೇಶ ಸಂಖ್ಯೆ:ರಾಚುಆ/ 07/ಟಿಫೆಡ್‌ಪಿ/2019, ದಿನಾಂಕ: 02-05-2019)**
**ವಿವಿಧ ಕಾರಣಗಳಿಂದ ತೆರವಾಗಿರುವ ತಾಲ್ಲೂಕು ಪಂಚಾಯತಿಗಳ ಸದಸ್ಯ ಸ್ಥಾನಗಳಿಗೆ ಉಪ-ಚುನಾವಣೆ ನಡೆಯಲಿರುವ ವಿವರಗಳು.**
**ತಾಲ್ಲೂಕು ಪಂಚಾಯತ್**

| ಕ್ರಸಂ. | ಜಿಲ್ಲೆಯ ಹೆಸರು | ತಾಲ್ಲೂಕಿನ ಹೆಸರು | ಕ್ಷೇತ್ರದ ಸಂಖ್ಯೆ ಮತ್ತು ಹೆಸರು |
|---|---|---|---|
| 1 | 2 | 3 | 4 |
| 1 | ಬೆಂಗಳೂರು | ಬೆಂಗಳೂರು ಪೂರ್ವ | 01-ಕಣ್ಣೂರು |
| 2 | ಚಿತ್ರದುರ್ಗ | ಹೊಸದುರ್ಗ | 20-ಶ್ರೀರಾಂಪುರ |
| 3 | ಚಾಮರಾಜನಗರ | ಗುಂಡ್ಲುಪೇಟೆ | 18-ಬಾಚಹಳ್ಳಿ |
| 4 | ಹಾವೇರಿ | ಸವಣೂರ | 11-ಯಲವಿಗಿ |
| 5 | ರಾಯಚೂರು | ಸಿಂಧನೂರು | 14-ಧಡೇಸೂಗೂರು |
| | | | 28-ಉದ್ಬಾಳ (ಯು) |
| 6 | ಯಾದಗಿರಿ | ಶೋರಾಪುರ | 07-ಹೆಬ್ಬಾಳ(ಬಿ) |
| | | | 32-ಗೆದ್ದಲಮರಿ |
| 7 | ಕಲಬುರಗಿ | ಜೇವರ್ಗಿ | 10-ಹಿಪ್ಪರಗಾ ಎಸ್.ಎನ್ |
| 8 | ಬೀದರ್ | ಬೀದರ್ | 21-ಮರಕುಂದಾ |

**ಎಂ.ಪಿ.ರಂಜಿತಾ**
ಅಧೀನ ಕಾರ್ಯದರ್ಶಿ,
ರಾಜ್ಯ ಚುನಾವಣಾ ಆಯೋಗ. ಕರ್ನಾಟಕ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 10